ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೋವಿಡ್ ಲಾಕ್‌ಡೌನ್‌ನಿಂದ ಉನ್ನತ ಶಿಕ್ಷಣ ಸಂಸ್ಥೆಗಳು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ತರಗತಿಗಳನ್ನು ಪ್ರಾರಂಭಿಸದ ಕುರಿತು

ಶ್ರೀ ಹೆಚ್.ಎಂ.ರಮೇಶಗೌ ಡ (ವಿಧಾನಸಭೆಯಿಂ ದ ಚುನಾಯಿತರಾದª Àರು):-

837 (877) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ಲಾಕ್‌ಡೌನ್‌ನಿಂದಾಗಿ ರಾಜ್ಯದ ಬಹುತೇಕ ಉನ್ನತ ಶಿಕ್ಷಣ ಸಂಸ್ಥೆಗಳು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ತರಗತಿಗಳನ್ನು ನಡೆಸಿಲ್ಲವಾದ ಕಾರಣ ಉನ್ನತ ಶಿಕ್ಷಣ ಪಡೆಯುವ ಯುವಕ ಯುವತಿಯರ ಮುಂದಿನ ಸ್ಥಿತಿಯೇನು; (ವಿವರ ನೀಡುವುದು)

(ಆ) ಉನ್ನತ ಶಿಕ್ಷಣ ಪಡೆಯುವ ಬಯಸುವ ವಿದ್ಯಾರ್ಥಿಗಳು ಈ ಶೈಕ್ಷಣಿಕ ವರ್ಷದ ತರಗತಿಗಳನ್ನು ಮತ್ತೆ ಪಡೆಯಲು ಸರ್ಕಾರ ಅವಕಾಶ ಮಾಡಿಕೊಡಲಿದೆಯೇ;

(ಇ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ವಿದ್ಯಾರ್ಥಿಗಳಂತೆಯೇ ಉನ್ನತ ಶಿಕ್ಷಣದ ವಿದ್ಯಾರ್ಥಿಗಳಿಗೂ ಆನ್‌ಲೈನ್ ಬೋದನೆಯ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

(ಈ) ಉನ್ನತ ಶಿಕ್ಷಣದ ವಿದ್ಯಾರ್ಥಿಗಳಿಗೆ ಈ ಶೈಕ್ಷಣಿಕ ವರ್ಷದ ಪರೀಕ್ಷೆಗಳನ್ನು ರದ್ದು ಮಾಡಲಾಗಿದೆಯೇ; ಉನ್ನತ ಶಿಕ್ಷಣದ ವಿದ್ಯಾರ್ಥಿಗಳಿಗೆ 2020ರ ಶೈಕ್ಷಣಿಕ ವರ್ಷವೇ ಇಲ್ಲವೇ ? (ವಿವರ ನೀಡುವುದು)